# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 217
ಸದಸ್ಯರ ಹೆಸರು : ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 12-07-2018
ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಪ್ರಸಕ್ತ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ವಿದ್ಯಾರ್ಥಿಗಳ ಕೊರತೆಯಿಂದಾಗಿ ವಿಲೀನ ಮಾಡಲಾಗುತ್ತಿದೆಯೇ; ಎಷ್ಟು ಶಾಲೆಗಳನ್ನು ವಿಲೀನಗೊಳಿಸಲಾಗುತ್ತಿದೆ; (ಜಿಲ್ಲಾವಾರು ವಿವರ ನೀಡುವುದು) | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ವಿದ್ಯಾರ್ಥಿಗಳ ಕೊರತೆಯಿಂದಾಗಿ ವಿಲೀನಗೊಳಿಸಿರುವುದಿಲ್ಲ. |
| ಆ. | ಸರ್ಕಾರಿ ಶಾಲೆಗಳ ಸಬಲೀಕರಣ 2017ರ ವರದಿಯನ್ನು ಜಾರಿಗೊಳಿಸುವ ಮತ್ತು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು) | ಸರ್ಕಾರಿ ಶಾಲೆ ಸಬಲೀಕರಣಗೊಳಿಸುವ ಸಲುವಾಗಿ ರಚಿಸಿದ ಸಮಿತಿ 2017ರ ವರದಿಯನ್ನು ಮಾನ್ಯ ಮುಖ್ಯ ಮಂತ್ರಿಗಳಿಗೆ ಸಲ್ಲಿಸಿದ್ದು ಸಚಿವ ಸಂಪುಟ ತೀರ್ಮಾನ ಆಗಿರುವುದಿಲ್ಲ. ಆದಾಗ್ಯೂ ಸರ್ಕಾರಿ ಶಾಲೆಗಳ ಸಬಲೀಕರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಜಾರಿಗೊಳಿಸಲಾಗಿದೆ.<br>1. ಈಗಾಗಲೇ ಸರ್ಕಾರಿ ಶಾಲಾ ಆವರಣದಲ್ಲಿ 4000ಕ್ಕೂ ಹೆಚ್ಚು ಅಂಗನವಾಡಿಗಳನ್ನು ನಡೆಸಲು ಅವಕಾಶ ಮಾಡಿಕೊಡಲಾಗಿದೆ.<br>2. ಸರ್ಕಾರಿ ಶಾಲೆಗಳಲ್ಲಿ ಹೆಚ್ಚುವರಿ ಕೊಠಡಿಗಳು ಲಭ್ಯವಿದ್ದೆಡೆ ಕಟ್ಟಡ ರಹಿತ ಅಂಗನವಾಡಿಗಳನ್ನು ಸ್ಥಳಾಂತರಿಸಲು ಅವಕಾಶ ಮಾಡಿಕೊಡಲಾಗಿದೆ.<br>3. ಎಸ್.ಡಿ.ಎಂ.ಸಿ, ಸಮುದಾಯದವರು ಹಾಗೂ ಸ್ವಯಂಸೇವಾ ಸಂಘ ಸಂಸ್ಥೆಯವರು ಸಹಕರಿಸಿದ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ನೀಡಲಾಗುತ್ತಿದೆ.<br><br>1. ಕನ್ನಡ ಹಾಗೂ ಇತರೆ ಅಲ್ಪಸಂಖ್ಯಾತ ಭಾಷಾ ಮಾಧ್ಯಮ ಶಾಲೆಗಳಲ್ಲಿ ಆಂಗ್ಲ ಭಾಷೆಯನ್ನು ಒಂದು ವಿಷಯವನ್ನಾಗಿ ಕಲಿಸಲು ಅವಕಾಶ ಕಲ್ಪಿಸಲಾಗಿದೆ.<br>2. 1ನೇ ತರಗತಿಯಿಂದ 3ನೇ ತರಗತಿಗೆ ನಲಿಕಲಿ ಪದ್ಧತಿಯನ್ನು ಅಳವಡಿಸಲಾಗಿದೆ. ಹಾಗೂ ಸಂತಸದಾಯಕ ಕಲಿಕೆಗೆ ಒತ್ತು ನೀಡಲಾಗಿದೆ.<br>3. ಗಣಿತ ಕಲಿಕೆ ಬಲವರ್ಧನೆಗಾಗಿ 4 ಮತ್ತು 5ನೇ |

| | | |
|---|---|---|
| | | ತರಗತಿಗಳಿಗೆ ಗಣಿತ ಕಲಿಕಾ ಆಂದೋಲನಾ ಕಾರ್ಯಕ್ರಮ ಅನುಷ್ಠಾನಗೊಳಿಸಿದ್ದು ಶಾಲೆಗಳಿಗೆ ಗಣಿತ ಕಿಟ್‌ಗಳನ್ನು ವಿತರಿಸಿದೆ.<br>4. ಆರ್.ಐ.ಇ, ಬೆಂಗಳೂರು ವತಿಯಿಂದ ಶಿಕ್ಷಕರಿಗೆ 1 ತಿಂಗಳ ಆಂಗ್ಲ ಭಾಷೆ ಬೋಧನಾ ತರಬೇತಿ ನೀಡಲಾಗುತ್ತಿದೆ.<br>5. ಮಕ್ಕಳ ಕಲಿಕೆಯನ್ನು ಉತ್ತಮ ಪಡಿಸಿ ಖಾತ್ರಿ ಪಡಿಸಿಕೊಳ್ಳಲು ಸರ್ಕಾರಿ ಶಾಲೆಗಳ 4 ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ಅಭ್ಯಾಸ ಪುಸ್ತಕಗಳನ್ನು ವಿತರಿಸಲಾಗುತ್ತಿದೆ.<br>6. ವಿಶ್ವಾಸ ಕಿರಣ ಕಾರ್ಯಕ್ರಮದ ಮೂಲಕ ಕಲಿಕೆಯಲ್ಲಿ ಹಿಂದುಳಿದ ಸರ್ಕಾರಿ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ತರಗತಿಗಳನ್ನು ನಡೆಸುವ ಮೂಲಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.<br>7. ರಾಜ್ಯಾದ್ಯಂತ 4 ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ CSAS(Census State Achivement Survey) & NAS (National Achievement Survey)(ಆಯ್ದ ಶಾಲೆಗಳಿಗೆ ನಡೆಸುವ ಮೂಲಕ ಮಕ್ಕಳ ಕಲಿಕೆಯನ್ನು ವಿಶ್ಲೇಷಿಸಿ ಸುಧಾರಿಸಲು ಕ್ರಮ ಕೈಗೊಳ್ಳಲಾಗಿದೆ.<br>8. ಶಾಲಾ ತರಗತಿಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಹಾಗೂ ಗುಣಮಟ್ಟದ ಶಿಕ್ಷಣ ನೀಡಲು ಡಿ.ಎಸ್.ಇ.ಆರ್.ಟಿ ಹಾಗೂ ಡಯಟ್‌ಗಳ ಮೂಲಕ ಗುರುಚೇತನಾ ಕಾರ್ಯಕ್ರಮದನ್ವಯ ಶಿಕ್ಷಕರಿಗೆ ವಿವಿಧ ರೀತಿಯ ಅಗತ್ಯ ತರಬೇತಿಗಳನ್ನು ನೀಡಲಾಗುತ್ತಿದೆ.<br>9. ತಂತ್ರಜ್ಞಾನ ಆಧಾರಿತ ಬೋಧನಾ ಕಲಿಕಾ ಕಾರ್ಯಕ್ರಮ (ಸಿ.ಎ.ಎಲ್.ಸಿ) ದಡಿಯಲ್ಲಿ ಶಿಕ್ಷಕರಿಗೆ ತರಗತಿ ಬೋಧನೆಯಲ್ಲಿ ತಂತ್ರಜ್ಞಾನದ ಬಳಕೆಯ ಬಗ್ಗೆ ತರಬೇತಿ ನೀಡಲಾಗುತ್ತಿದೆ.<br>10. ಎಸ್.ಎ.ಟಿ.ಎಸ್ ವ್ಯವಸ್ಥೆ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಜಾಡು ಹಿಡಿಯಲಾಗುತ್ತಿದೆ.<br>11. ಪ್ರೌಢಶಾಲಾ ಅರ್ಹ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಮಾಡಲಾಗುತ್ತಿದೆ.<br>12. ಶಾಲೆಗಳ ಮೂಲಭೂತ ಸೌಲಭ್ಯಗಳನ್ನು ಉತ್ತಮಪಡಿಸುತ್ತಿದ್ದು ಶಾಲಾ ಅನುದಾನ ಹಾಗೂ ನಿರ್ವಹಣಾ ಅನುದಾನ ನೀಡಲಾಗುತ್ತಿದೆ ಹಾಗೂ ಆಯ್ದ ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ |

| | | |
|---|---|---|
| | | ನೀಡಲಾಗುತ್ತಿದೆ.<br>13. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳ ಕಲಿಕೆಯನ್ನು ಉತ್ತಮಪಡಿಸಲು ರಾಜ್ಯದ ಆಯ್ದ ಜಿಲ್ಲೆಗಳಲ್ಲಿ ಓದು ಕರ್ನಾಟಕ ಕಾರ್ಯಕ್ರಮವನ್ನು ಜಾರಿಗೊಳಿಸಿದೆ.<br>14. ಗ್ರಾಮಾಂತರ ಪ್ರದೇಶಗಳಲ್ಲಿ 74 ಆದರ್ಶ ವಿದ್ಯಾಲಯಗಳ ಸ್ಥಾಪನೆ ಮೂಲಕ ಗ್ರಾಮೀಣ ಮಕ್ಕಳಿಗೆ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವ ಅವಕಾಶ ಕಲ್ಪಿಸಲಾಗಿದೆ.<br>15. ಶಿಕ್ಷಕರ ಖಾಲಿಹುದ್ದೆಗಳಿಗೆ 25,000 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.<br>16. 6 ರಿಂದ 8ನೇ ತರಗತಿಗೆ ಬೋಧಿಸಲು 10.000 ಪದವೀಧರ ಶಿಕ್ಷಕರ ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದೆ.<br>17. ಒಂದೇ ಕಾಂಪೌಂಡ್‌ನಲ್ಲಿರುವ 176 ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ವಿಲೀನಗೊಳಿಸಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗಿದೆ.<br>ಅಂಗನವಾಡಿ ಕೇಂದ್ರಗಳು ಮಕ್ಕಳ ಮತ್ತು ಮಹಿಳಾ ಅಭಿವೃದ್ಧಿ ಇಲಾಖೆಯಡಿಯಲ್ಲಿ ಹಾಗೂ ಸರ್ಕಾರಿ ಶಾಲೆಗಳು ಸಾರ್ವಜನಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವುದರಿಂದ ಎರಡೂ ಇಲಾಖೆಗಳ ನಡುವೆ ಸಮನ್ವಯದಿಂದ ಕಾರ್ಯ ಹಂಚಿಕೆ ಆಗಬೇಕಾಗಿದೆ. |
| ಇ. | ಕಳೆದ ಐದು ವರ್ಷಗಳ ಅವಧಿಯಲ್ಲಿ ಎಷ್ಟು ಶಾಲೆಗಳನ್ನು ವಿಲೀನಗೊಳಿಸಲಾಗಿದೆ ಮತ್ತು ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ? (ಜಿಲ್ಲಾವಾರು ವಿವರ ನೀಡುವುದು) | ಕಳೆದ ಐದು ವರ್ಷಗಳ ಅವಧಿಯಲ್ಲಿ ಈ ಕೆಳಕಂಡ 02 ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಮುಚ್ಚಲು ಸರ್ಕಾರ ಆದೇಶಿಸಿರುತ್ತದೆ.<br><br>. ಸರ್ಕಾರಿ ಆದೇಶ ಸಂಖ್ಯೆ ಇಡಿ 271 ಯೋಸಾಕಾ 2014 ದಿನಾಂಕ:-18-11-2015 ರಂತೆ 2015-16ನೇ ಸಾಲಿನಲ್ಲಿ ಸರ್ಕಾರಿ ಶಕುಂತಲಾ ಮರಾಠಿ ಮಾದರಿ ಶಾಲೆ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಈ ಶಾಲೆಯ ಕಟ್ಟಡ ಹಳೆದಾಗಿದ್ದು, ವಾಣಿಜ್ಯ ವ್ಯವಹಾರದ ಸ್ಥಳವಾಗಿದ್ದು, ಶಬ್ದ ಮಾಲಿನ್ಯದಿಂದ ಕೂಡಿರುವುದರಿಂದ ಈ ಶಾಲೆಯನ್ನು ಮುಚ್ಚಲಾಗಿದೆ.<br>2. ಸರ್ಕಾರಿ ಆದೇಶ ಸಂಖ್ಯೆ ಇಡಿ 536 ಪಿಬಿಎಸ್ 2015 ದಿನಾಂಕ: 20-05-2016 ರಂತೆ 2016-17ನೇ ಸಾಲಿನಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ವಸಂತನಗರ, ರಾಜಭವನ, ಬೆಂಗಳೂರು |

| | | |
|---|---|---|
| | | ಉತ್ತರ ಜಿಲ್ಲೆ ಈ ಶಾಲೆಯನ್ನು ಭದ್ರತಾ ದೃಷ್ಟಿಯಿಂದ ಮುಚ್ಚಲಾಗಿರುತ್ತದೆ.<br>ಈ ಎರಡೂ ಶಾಲೆಗಳ ಮಕ್ಕಳನ್ನು ಸಮೀಪದ ಶಾಲೆಗೆ ದಾಖಲು ಮಾಡಲಾಗಿದೆ.<br>ಸರ್ಕಾರಿ ಪ್ರೌಢಶಾಲೆಗಳನ್ನು ವಿಲೀನಗೊಳಿಸಿರುವುದಿಲ್ಲ ಹಾಗೂ ಮುಚ್ಚಿರುವುದಿಲ್ಲ. |

ಇಡಿ 41 ಪಿಎಂಎ 2018

(ಎನ್. ಮಹೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.